# ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.

## ಸಿ.ಸಿ. 1189/2024

**ಸಾಕ್ಷಿಯನ್ನು ದಿನಾಂಕಃ 20.08.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರ ಶ್ರೀ. ಡಿ.ಸಿ. ವಕೀಲರಿಂದಃ**

ಈ ಪ್ರಕರಣದಲ್ಲಿ ನಾನು ಪಿರ್ಯಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದನ್ನು ನನ್ನ ಮಾಹಿತಿಯ ಮೇರೆಗೆ ನನ್ನ ವಕೀಲರು ತಯಾರಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ನನ್ನ ಸಹಿಗಳನ್ನು ಹಾಕಿರುತ್ತೇನೆ. ಈ ಕೆಳಗಿನ ದಾಖಲೆಗಳನ್ನು ನಿಶಾನೆಗಳಾಗಿ ಹಾಜರುಪಡಿಸಿರುತ್ತೇನೆ.

ಆರೋಪಿ ನನಗೆ ನೀಡಿದ 02 ಚೆಕ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-1** ಮತ್ತು **ನಿ.ಪಿ.-2** ಎಂದು, ಆರೋಪಿಯ ಸಹಿಗಳನ್ನು ಕ್ರಮವಾಗಿ **ನಿ.ಪಿ.-1(ಎ)** ಮತ್ತು **ನಿ.ಪಿ.-2(ಎ)** ಎಂದು, ಬ್ಯಾಂಕ್ ನವರು ನೀಡಿದ 02 ಹಿಂಬರಹಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-3** ಮತ್ತು **ನಿ.ಪಿ.-4** ಎಂದು, ಆರೋಪಿಗೆ ವಕೀಲರ ಮುಖಾಂತರ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-5** ಎಂದು, 02 ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-6** ಮತ್ತು **ನಿ.ಪಿ.-7** ಎಂದು, 02 ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-8** ಮತ್ತು **ನಿ.ಪಿ.-9** ಎಂದು, ದಿನಾಂಕಃ 07.10.2022 ರಂದು ಮಾಡಿಕೊಂಡ ಕ್ರಯ ಒಪ್ಪಂದ ಕರಾರು ಪತ್ರವನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.-10** ಎಂದು, ದಿನಾಂಕಃ 23.05.2024 ರಂದು ಮಾಡಿಕೊಂಡ ನೋಂದಾಯಿತ ಕ್ರಯ ಪತ್ರದ ಆನ್ ಲೈನ್ / ಡಿಜಿಟಲ್ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.-11** ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಪಿರ್ಯಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿಜೆ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**